ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*
ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಜುಲೈ 25 , 2014

ಪತ್ರಿಕಾ ಪ್ರಕಟಣೆ

## ಅರ್ಕಾವತಿ ಬಡಾವಣೆ,
## ಸಿ ಐ ಡಿ ತನಿಖೆಗೆ ಒಪ್ಪಿಸಲು ಸರ್ಕಾರ ಸಿದ್ಧ : ಮುಖ್ಯಮಂತ್ರಿ

ಬೆಂಗಳೂರು, ಜುಲೈ 25 (ಕರ್ನಾಟಕ ವಾರ್ತೆ) :

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅರ್ಕಾವತಿ ಬಡಾವಣೆ ನಿರ್ಮಿಸಲು ಸ್ವಾಧೀನಪಡಿಸಿಕೊಂಡಿದ್ದ ಜಮೀನಿನಲ್ಲಿ ಅಕ್ರಮ ವ್ಯವಹಾರ ನಡೆದಿದೆ ಎಂಬ ಪ್ರತಿಪಕ್ಷಗಳ ಆರೋಪದಲ್ಲಿ ಹುರುಳಿಲ್ಲ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದರು.

ಈ ವಿಷಯ ಕುರಿತು ವಿಧಾನ ಸಭೆಯ ಮೊಗಸಾಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಅರ್ಕಾವತಿ ಬಡಾವಣೆ ನಿರ್ಮಿಸುವ ಪ್ರಕ್ರಿಯೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು 2003 ರಲ್ಲಿಯೇ 16 ಗ್ರಾಮಗಳಿಂದ 3839.12 ಎಕರೆ ಜಮೀನು ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಲಾಗಿತ್ತು. ಪ್ರಾರಂಭಿಕ ಅಧಿಸೂಚನೆಯಿಂದ 589.12 ಎಕರೆ ಜಮೀನು ಹೊರತುಪಡಿಸಿದ ಪ್ರಾಧಿಕಾರವು ಉಳಿಕೆ ಜಮೀನಿಗೆ ಅಂತಿಮ ಅಧಿಸೂಚನೆ ಹೊರಡಿಸಲು ಪರಿಷ್ಕೃತ ಅಧಿಸೂಚನೆ ಹೊರಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು.

ಹೆಚ್ಚುವರಿಯಾಗಿ 500 ಎಕರೆ ಜಮೀನನ್ನು ಪ್ರಾರಂಭಿಕ ಅಧಿಸೂಚನೆಯಿಂದ ದಿನಾಂಕ : 23–02–2004 ರಂದು ಸರ್ಕಾರ ಒಟ್ಟು 1089.12 ಎಕರೆ ಭೂಮಿಯನ್ನು ಅಧಿಸೂಚನೆಯಿಂದ ಹೊರತುಪಡಿಸಿ 2750 ಎಕರೆ ಭೂ ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಿ ರಾಜ್ಯಪತ್ರದಲ್ಲಿ ಪ್ರಚುರ ಪಡಿಸಲಾಯಿತು.

ಭೂ ಸ್ವಾಧೀನ ಪ್ರಕ್ರಿಯೆಯನ್ನು ಪ್ರಶ್ನಿಸಿ ಹಲವಾರು ಭೂ ಮಾಲೀಕರು 2005 ರ ಏಪ್ರಿಲ್ 15 ರಂದು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ಪ್ರಾರಂಭಿಕ ಹಾಗೂ ಅಂತಿಮ ಅಧಿಸೂಚನೆಯ. 1089.12 ಎಕರೆ ಜಮೀನನ್ನು ಸ್ವಾಧೀನದಿಂದ ಕೈಬಿಡುವ ಬಗ್ಗೆ ಪ್ರಾಧಿಕಾರದಲ್ಲಾಗಲೀ ಅಥವಾ ಸರ್ಕಾರದಲ್ಲಾಗಲೀ ಕಡತಗಳು ಹಾಗೂ ತಃಖ್ತೆಗಳು ಲಭ್ಯವಿಲ್ಲವೆಂದು ಪ್ರಾಧಿಕಾರವು ನ್ಯಾಯಾಲಯಕ್ಕೆ ತಿಳಿಸಿತ್ತು. ರಿಟ್ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ಪ್ರಾಧಿಕಾರದ ಪರ ವಕೀಲರು ಅಧಿಸೂಚನೆಯ ಅನ್ವಯ ತಯಾರಿಸಿದ ನಕ್ಷೆ, ಅಂತಿಮ ಅಧಿಸೂಚನೆಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದರು. ಇದನ್ನು ಅವಗಾಹಿಸಿದ ನ್ಯಾಯಾಲಯವು ಎರಡೂ ಅಧಿಸೂಚನೆಗಳ ನಡುವೆ ಹೊರತುಪಡಿಸಿರುವ ಜಮೀನುಗಳ ವಸ್ತು ಸ್ಥಿತಿ ಪರಿಶೀಲಿಸಿದಾಗ ತಾರತಮ್ಯವಾಗಿದೆ ಎಂಬ ಭೂ ಮಾಲೀಕರ ಆರೋಪದಲ್ಲಿ ಮೇಲ್ನೋಟಕ್ಕೆ ಸತ್ಯಾಂಶವಿದೆ ಎಂದು ನ್ಯಾಯಾಲಯವು ಅಭಿಪ್ರಾಯಪಟ್ಟಿತು.

ಈ ಎಲ್ಲಾ ಅಂಶಗಳನ್ನು ಪರಿಗಣಿಸಿದ ರಾಜ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ಏಕ ಸದಸ್ಯ ಪೀಠದ ಆದೇಶವನ್ನು ರದ್ದುಪಡಿಸಿ ಮರು ವಿಚಾರಣೆ ನಡೆಸಲು ಆರು ಮಾರ್ಗಸೂಚಿಗಳನ್ನು ನಿಗದಿಪಡಿಸಿ ಆದೇಶ ಹೊರಡಿಸಿತ್ತು.

ನ್ಯಾಯಾಲಯವು ನಿಗದಿಪಡಿಸಿರುವ ಆರು ಮಾರ್ಗಸೂಚಿಗಳ ವ್ಯಾಪ್ತಿಗೊಳಪಡುವ ಜಮೀನನ್ನು ಭೂ ಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸುವ ಜವಾಬ್ದಾರಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ನಿಗಿಪಡಿಸಿ, ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಸ್ವಾಧೀನ ಪ್ರಕ್ರಿಯೆಯಿಂದ ಹೊರತುಪಡಿಸಿರುವ ಜಮೀನುಗಳನ್ನು ಹೊರತುಪಡಿಸಿ, ಉಳಿಕೆ ಜಮೀನುಗಳ ಕುರಿತು ಪರಿಷ್ಕೃತ ಯೋಜನೆಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಬೇಕೆಂದೂ ಹಾಗೂ ಈ ನಿಟ್ಟಿನಲ್ಲಿ ಮುಂದಿನ ಅಗತ್ಯ ಕ್ರಮ ಕೈಗೊಳ್ಳಬೇಕೆಂದೂ ನ್ಯಾಯಾಲಯವು ಸರ್ಕಾರಕ್ಕೆ ಸೂಚಿಸಿತ್ತು.

ರಾಜ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ ಆದೇಶವನ್ನು ಪ್ರಶ್ನಿಸಿ ಹಲವಾರು ಭೂ ಮಾಲೀಕರು ಭಾರತ ಸರ್ವೋಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ದಾಖಲಿಸಿದ್ದರು. ಕರ್ನಾಟಕ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ ಆದೇಶವನ್ನು 2010 ರ ಮೇ 5 ರಂದು ಎತ್ತಿ ಹಿಡಿದ ಸರ್ವೋಚ್ಚ ನ್ಯಾಯಾಲಯವು ಆರು ಮಾರ್ಗಸೂಚಿಗಳ ಅಡಿಯಲ್ಲಿ ಭೂ ಸ್ವಾಧೀನ ಪಡಿಸಿಕೊಂಡಿರುವ ಸಂಬಂಧಿತ ಜಮೀನು ಇದ್ದಲ್ಲಿ ಅವುಗಳನ್ನು ಹೊರತುಪಡಿಸಬೇಕು ಎಂದು ಆದೇಶಿಸಿದೆ.

ಅರ್ಕಾವತಿ ಬಡಾವಣೆಯಲ್ಲಿ 2007 ಮೇ 4 ರಿಂದ 2010 ರ ಆಗಸ್ಟ್ 19 ರವರೆಗೆ 198.2 ಎಕರೆ, 2010 ರ ಅಕ್ಟೋಬರ್ 23 ಮತ್ತು 2011 ರ ನವೆಂಬರ್ 30 ರ ಆದೇಶದಂತೆ ಒಟ್ಟು 83.08 ಎಕರೆ ಹಾಗೂ 2013 ಫೆಬ್ರವರಿ 12 ರಂದು 422.25 ಎಕರೆ ಮತ್ತು ಅದೇ ದಿನ ಮತ್ತೊಂದು ಅಧಿಸೂಚನೆಯಲ್ಲಿ 119.09 ಎಕರೆ ಭೂಮಿಯನ್ನು ಸ್ವಾಧೀನದಿಂದ ಕೈ ಬಿಡಲಾಯಿತು. ನ್ಯಾಯಾಲಯದ ರಿಟ್ ಅರ್ಜಿಯಂತೆ ಪುನರ್ಪರಿಷ್ಕೃತ ಯೋಜನೆಯಲ್ಲಿ ಒಟ್ಟು 983.33 ಎಕರೆ ಜಮೀನನ್ನು ಭೂ ಸ್ವಾಧೀನದಿಂದ ಹೊರತುಪಡಿಸಿ ಪರಿಷ್ಕೃತ ಯೋಜನೆಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿತ್ತು.

ಈ ಮಧ್ಯೆ 2013 ಏಪ್ರಿಲ್ 19 ರಂದು ಎಸ್. ಜಯರಾಮ್ ಮತ್ತಿತರರು ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿದ್ದ ರಿಟ್ ಅರ್ಜಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಿರ್ಣಯದ ಅಗತ್ಯ ದಾಖಲಾತಿಗಳನ್ನು ಒಂದು ತಿಂಗಳೊಳಗಾಗಿ ಹಾಜರುಪಡಿಸುವಂತೆ ಹಾಗೂ ಸರ್ಕಾರವು ಈ ನಿರ್ಣಯವನ್ನು ವಿಭಾಗೀಯ ಪೀಠದ ನಿರ್ದೇಶನದಂತೆ 15 ದಿನಗಳೊಳಗೆ ಸೂಕ್ತ ಕ್ರಮ ಕೈಗೊಳ್ಳಲು ನ್ಯಾಯಾಲಯವು ಆದೇಶಿಸಿತ್ತು. ನ್ಯಾಯಾಲಯದ ಆದೇಶ ಅನುಷ್ಠಾನವಾಗಿಲ್ಲವೆಂದು ಎಸ್. ಜಯರಾಮ್ ಮತ್ತಿತರರು ಸಲ್ಲಿಸಿದ್ದ ನ್ಯಾಯಾಂಗ ನಿಂದನಾ ಅರ್ಜಿಯನ್ನು 2014 ರ ಜನವರಿ 21 ರಂದು ವಿಚಾರಣೆ ನಡೆಸಿದ ನ್ಯಾಯಾಲಯವು ಯೋಜನೆಯನ್ನು ಅನುಷ್ಠಾನಗೊಳಿಸಿ ಒಂದು ವಾರದೊಳಗಾಗಿ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಆದೇಶಿತ್ತು.

ತದನಂತರ ಗುರುಪಾದಪ್ಪ ನಾರಮಾರಪಳ್ಳಿ ಅವರು ಸಲ್ಲಿಸಿದ್ದ ನ್ಯಾಯಾಂಗ ನಿಂದನೆಯ ಮತ್ತೊಂದು ಅರ್ಜಿಯ ವಿಚಾರಣೆಯನ್ನು ಕೈಗೆತ್ತಿಕೊಂಡ ನ್ಯಾಯಾಲಯವು ದಾಖಲೆಯನ್ನು ಸಲ್ಲಿಸುವಂತೆ ಸರ್ಕಾರಕ್ಕೆ ನೋಟೀಸ್ ಜಾರಿ ಮಾಡಿತ್ತು.

ಈ ನಡುವೆ ಏಪ್ರಿಲ್ 3 ರಂದು ನ್ಯಾಯಾಲಯದಲ್ಲಿ ನಡೆದ ವಿಚಾರಣಾ ಸಂದರ್ಭದಲ್ಲಿ ರಾಜ್ಯದಲ್ಲಿ ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಪುನರ್ಪರಿಷ್ಕೃತ ಯೋಜನೆಯನ್ನು ಭಾರತ ಚುನಾವಣಾ ಆಯೋಗದ ಸಹಮತಿ ಪಡೆದು ನ್ಯಾಯಾಲಯದ ಮುಂದೆ ಅರ್ಕಾವತಿ ಬಡಾವಣೆಗೆ ಪ್ರಾಧಿಕಾರ ಸಲ್ಲಿಸಿದ್ದ 1766.07 ಎಕರೆ ಜಮೀನಿಗೆ ಸಂಬಂಧಿಸಿದಂತೆ ಪುನರ್ಪರಿಷ್ಕೃತ ಯೋಜನೆಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನುಮತಿ ನೀಡಿ ಆದೇಶ ಹೊರಡಿಸಿದೆ. ನ್ಯಾಯಾಂಗ ನಿಂದನಾ ಪ್ರಕರಣದಲ್ಲಿ ಜೂನ್ 18 ರಂದು ಮರು ಪರಿಷ್ಕೃತ ಯೋಜನೆಯ ಅಧಿಸೂಚನೆಯನ್ನು ಹೊರಡಿಸಿ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿತ್ತು.

ಗುರುಪಾದಪ್ಪ ನಾರಮಾರಪಳ್ಳಿ ಅವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ನ್ಯಾಯಾಂಗ ನಿಂದನಾ ಪ್ರಕರಣದ ವಿಚಾರಣಾ ಸಂದರ್ಭದಲ್ಲಿ ಅರ್ಕಾವತಿ ಬಡಾವಣೆಯ ಪುನರ್ಪರಿಷ್ಕೃತ ಯೋಜನೆಯ ಅಂತಿಮ ಅಧಿಸೂಚನೆಯನ್ನು ಜೂನ್ 20 ರಂದು ನ್ಯಾಯಾಲಯದಲ್ಲಿ ಹಾಜರುಪಡಿಸಿತ್ತು. ಇದನ್ನು ಪರಿಗಣಿಸಿದ ನ್ಯಾಯಾಲಯವು ನ್ಯಾಯಾಂಗ ನಿಂದನಾ ಪ್ರಕರಣವನ್ನು ಮುಕ್ತಾಯಗೊಳಿಸಿದೆ. ಈ ಪ್ರಕರಣದಲ್ಲಿ ರಾಜ್ಯ ಸರ್ಕಾರದ ಪಾತ್ರವಿಲ್ಲ. ನಮ್ಮ ಸರ್ಕಾರವು ಅಧಿಕಾರಕ್ಕೆ ಬಂದ ನಂತರ ಒಂದಿಂಚೂ ಜಾಗವನ್ನು ಡಿನೋಟಿಫೈ ಮಾಡಿಲ್ಲ. ಈ ವಿಷಯ ಕುರಿತು ಮುಕ್ತ ತನಿಖೆಗೂ ಬದ್ಧ. ಪ್ರಕರಣವನ್ನು ಸಿ ಐ ಡಿ ಗೆ ಹಸ್ತಾಂತರಿಸಲೂ ಸರ್ಕಾರ ಸಿದ್ಧ ಎಂದು ಮುಖ್ಯಮಂತ್ರಿ ಸ್ಪಷ್ಟನೆ ನೀಡಿದರು.

ಪ್ರಕರಣ ಕುರಿತು ಪ್ರತಿಪಕ್ಷಗಳು ಅನಗತ್ಯ ಗೊಂದಲ ಸೃಷ್ಟಿಸಿ ರಾಜಕೀಯ ಮಾಡುತ್ತಿವೆ ಎಂದು ಶ್ರೀ ಸಿದ್ದರಾಮಯ್ಯ ಅವರು ಆರೋಪಿಸಿದರು.

*************

ಡಿ ಪಿ ಎಂ